ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 12/9/202

# ರೈಲ್ವೆ ಸಚಿವ ಸುರೇಶ್ ಅಂಗಡಿ, ಎಸ್. ಆರ್.ವಿಶ್ವನಾಥ್‌ಗೆ ಸೋಂಕು

ಬೆಂಗಳೂರು: ರೈಲ್ವೆ ಖಾತೆ ರಾಜ್ಯ ಸಚಿವ ಸುರೇಶ ಅಂಗಡಿ, ಮುಖ್ಯಮಂತ್ರಿ ಯಡಿಯೂರಪ್ಪ ಅವರ ರಾಜಕೀಯ ಕಾರ್ಯದರ್ಶಿ ಎಸ್.ಆರ್.ವಿಶ್ವನಾಥ್ ಎಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು ಮತ್ತು ಹುಣಸೂರಿನ ಶಾಸಕ ಎಚ್.ಪಿ.ಮಂಜುನಾಥ್ ಅವರಿಗೆ ಕೊರೋನಾ ದೃಢಪಟ್ಟಿದೆ. ಗುರುವಾರವಷ್ಟೇ ಬೆಳಗಾವಿಯಿಂದ ದೆಹಲಿಗೆ ಪ್ರಯಾಣ ಬೆಳೆಸಿರುವ ಸಚಿವ ಅಂಗಡಿ, ದೆಹಲಿಯಲ್ಲಿ ಪರೀಕ್ಷೆಗೆ ಒಳಗಾದ ವೇಳೆ ಪಾಸಿಟಿವ್ ಬಂದಿದೆ ಎಂದು ಟ್ವೀಟರ್ ಮೂಲಕ ಖಚಿತಪಡಿಸಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ. ಮೈಸೂರಿನ ಎಚ್.ಡಿ.ಕೋಟೆ ಶಾಸಕ ಅನಿಲ್ ಚಿಕ್ಕಮಾದು ಬಿಡುವಿಲ್ಲದ ಪ್ರವಾಸದಿಂದ 2 ದಿನಗಳಿಂದ ಜ್ವರ, ಕೆಮ್ಮು ಇತ್ತು. ಈ ಹಿನ್ನೆಲೆಯಲ್ಲಿ ಕೋವಿಡ್ ಟೆಸ್ಟ್ ಮಾಡಿಸಿದ್ದು, ವರದಿಯಲ್ಲಿ ಸೋಂಕು ದೃಢಪಟ್ಟಿದೆ. ಇನ್ನು ವಿಶ್ವನಾಥ್ ಸಹ ರೋಗಲಕ್ಷಣಗಳು ಇಲ್ಲದಿದ್ದರೂ ವೈದ್ಯರ ಸಲಹೆ ಮೇರೆಗೆ ಆಸ್ಪತ್ರೆಗೆ ದಾಖಲಾಗಿದ್ದು, ಹುಣಸೂರು ಶಾಸಕ ಎಚ್.ಪಿ.ಮಂಜುನಾಥ್ ಸೋಂಕು ತಗುಲಿದ್ದು, ಚಿಕಿತ್ಸೆಗೊಳಗಾಗಿದ್ದಾರೆ.